# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ತಾಂ.ಮ/ಯ.ವ/ಪಿ.ಆರ್/ 06 /2018–19

ಮುಖ್ಯಅಭಿಯಂತರವರ ಕಛೇರಿ
ಯಲಹಂಕ ವಲಯ,ಬೃ.ಬೆಂ.ಮ.ಪಾ.
ಬೆಂಗಳೂರು–92
02.07.18

## ಮಾರ್ಪಾಡಿತ ತಾಂತ್ರಿಕ ಮಂಜೂರಾತಿ

ವಿಷಯ: Estimate for Providing water supply through drilling new Borewells and water pipeline in Amruthahalli Jakkur, Sahakaranagara, GKVK Layout, Yoshodhanagara, Padma Tent Road, L and T Layout, Byatarayanapura and surrounding areas in ward no-7

ಉಲ್ಲೇಖ: ಈ ಕಛೇರಿಯ ತಾಂತ್ರಿಕ ಮಂಜೂರಾತಿ ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ತಾಂ.ಮ/ಯ.ವ/ಪಿ.ಆರ್/498/2017–18, ದಿನಾಂಕ:27–12–2017.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು **2016–17**ನೇ ಸಾಲಿನ ಕೆಪಿಡಬ್ಲ್ಯೂಡಿ ಎಸ್ ಆರ್ ದರಪಟ್ಟಿಯನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯ ಮೇಲ್ಕಂಡ ಕಾಮಗಾರಿಯನ್ನು ಪಿ–3293 ಲೆಕ್ಕಶೀರ್ಷಿಕೆ ಅಡಿಯಲ್ಲಿ ರೂ 98,99,621.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಅಂದಾಜು ಪಟ್ಟಿಗೆ ಮಾರ್ಪಾಡಿತ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮುಂದುವರೆದು ಸದರಿ ಕಾಮಗಾರಿಗೆ ಈಗಾಗಲೇ ಉಲ್ಲೇಖದಂತೆ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದ್ದು, ಸದರಿ ತಾಂತ್ರಿಕ ಮಂಜೂರಾತಿಯನ್ನು ರದ್ದುಪಡಿಸಿ, ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಸ್ತಾಪಿತ ಮಾರ್ಪಾಡಿತ ಅಂದಾಜುಪಟ್ಟಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011–12, ದಿನಾಂಕ:05–05–2016ಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಮಾರ್ಪಾಡಿತ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ಮಾರ್ಪಾಡಿತ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 7–8 ಕ್ರ.ಸಂ 06 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಕಾಮಗಾರಿಯನ್ನು ಕರ್ನಾಟಕ ಪಾರದರ್ಶಕ ನಿಯಮಾನುಸಾರ ನಿರ್ವಹಿಸಲು ಕ್ರಮ ವಹಿಸುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Poperty register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು.

ಮುಖ್ಯ ಅಭಿಯಂತರರು
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು–92

ಪ್ರತಿಯನ್ನು:

1. ಸಹಾಯಕ ನಿಯಂತ್ರಕರು (ಹಣಕಾಸು), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
2. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.